ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE: 23/1/2020

# ಕಂಪ್ಲಿ ಹಲ್ಲೆ ಪ್ರಕರಣ: ರಾಜಿ ಯತ್ನ, ಸಮಯ ಕೇಳಿದ ಆನಂದ್ ಸಿಂಗ್

ಉದಯವಾಣಿ 23/1/20



**ಬೆಂಗಳೂರು:** ಬಿಡದಿಯ ಈಗಲ್ ಟನ್ ರೆಸಾರ್ಟ್‌ನಲ್ಲಿ ಶಾಸಕ ಕಂಪ್ಲಿ ಗಣೇಶ್ ತಮ್ಮ ಮೇಲೆ ನಡೆಸಿದ ಮಾರಣಾಂತಿಕ ಹಲ್ಲೆ ಪ್ರಕರಣವನ್ನು ಪರಸ್ಪರ ರಾಜೀ ಸಂಧಾನ ಮೂಲಕ ಬಗೆಹರಿಸಿಕೊಳ್ಳಲು ಮುಂದಾಗಿರುವ ಶಾಸಕ ಆನಂದ್ ಸಿಂಗ್, ಈ ವಿಚಾರವಾಗಿ ಕೋರ್ಟ್ ಮುಂದೆ ಹಾಜರಾಗಲು 10 ದಿನ ಕಾಲಾವಕಾಶ ಕೇಳಿದ್ದಾರೆ.

ಶಾಸಕ ಆನಂದ್ ಸಿಂಗ್ ಮೇಲಿನ ಮಾರಣಾಂತಿಕ ಹಲ್ಲೆ ಹಾಗೂ ಕೊಲೆಯತ್ನ ಪ್ರಕರಣದ ಸಂಬಂಧ ತಮ್ಮ ವಿರುದ್ಧ ದಾಖಲಾಗಿರುವ ಎಫ್ಐಆರ್ ಹಾಗೂ ಆ ಕುರಿತ ವಿಶೇಷ ನ್ಯಾಯಾಲಯದ ವಿಚಾರಣೆ ರದ್ದುಪಡಿಸಬೇಕು ಎಂದು ಕೋರಿ ಕಂಪ್ಲಿ ಶಾಸಕ ಜೆ.ಎನ್ ಗಣೇಶ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ.

ಪ್ರಕರಣವನ್ನು ಪರಸ್ಪರ ರಾಜೀಸಂಧಾನ ಮೂಲಕ ಬಗೆಹರಿಸಿಕೊಳ್ಳುವುದಾಗಿ ಇಬ್ಬರು ಶಾಸಕರ ಪರ ವಕೀಲರು ಹೈಕೋರ್ಟ್‌ಗೆ ತಿಳಿಸಿದ್ದರು. ಅದರಂತೆ, ಆ ಕುರಿತು ಹೇಳಿಕೆ ನೀಡಲು ಬುಧವಾರ ವಿಚಾರಣೆಗೆ ಖುದ್ದು ಹಾಜರಿರುವಂತೆ ಶಾಸಕರಿಬ್ಬರಿಗೂ ಹೈಕೋರ್ಟ್ ಮಂಗಳವಾರ ಸೂಚನೆ ನೀಡಿತ್ತು.

ಅರ್ಜಿ ವಿಚಾರಣೆ ನಡೆಸುತ್ತಿರುವ ನ್ಯಾ. ಬಿ.ಎ ಪಾಟೀಲ್ ಅವರಿದ್ದ ಏಕಸದಸ್ಯ ನ್ಯಾಯಪೀಠದ ಮುಂದೆ ಬುಧವಾರ ಶಾಸಕ ಜೆ.ಎನ್. ಗಣೇಶ್ ಹಾಜರಾಗಿದ್ದರು. ಆದರೆ, ಆನಂದ್ ಸಿಂಗ್ ಗೈರಾಗಿದ್ದರು. ಈ ವೇಳೆ, ವಿಜಯನಗರ (ಹೊಸಪೇಟೆ) ಶಾಸಕ ಆನಂದ್ ಸಿಂಗ್ ಪರ ವಕೀಲರು, ತಮ್ಮ ಕಕ್ಷಿದಾರ ಹೊರ ಪ್ರದೇಶದಲ್ಲಿ ಇದ್ದಾರೆ. ಹೀಗಾಗಿ, ನ್ಯಾಯಾಲಯದ ಮುಂದೆ ಹಾಜರಾಗಲು ಅವರಿಗೆ ಹತ್ತು ದಿನ ಕಾಲಾವಕಾಶ ನೀಡಬೇಕು ಎಂದು ಕೋರಿದರು.

ಈ ವೇಳೆ ಕಂಪ್ಲಿ ಗಣೇಶ್ ಪರ ವಕೀಲರು, ಪ್ರಕರಣವನ್ನು ಪರಸ್ಪರ ರಾಜೀಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಆನಂದ್ ಸಿಂಗ್ ಅವರು ಒಪ್ಪಿದ್ದಾರೆ. ಆದರೆ, ಗುರುವಾರ ಪ್ರಕರಣವು ವಿಚಾರಣಾ ನ್ಯಾಯಾಲಯದಲ್ಲಿ ವಿಚಾರಣೆಗೆ ಬರಲಿದ್ದು, ಸದ್ಯ ಪ್ರಕರಣ ದೋಷಾರೋಪಗಳನ್ನು ಹೊರಿಸುವ ಹಂತದಲ್ಲಿದೆ. ಹೀಗಾಗಿ ವಿಚಾರಣಾ ನ್ಯಾಯಾಲಯದ ವಿಚಾರಣೆಗೆ ತಡೆ ನೀಡಬೇಕು ಎಂದು ಕೋರಿದರು. ನ್ಯಾಯಮೂರ್ತಿಗಳು ಕಾಲಾವಕಾಶ ನೀಡಿ ವಿಚಾರಣೆಯನ್ನು ಫೆ.3ಕ್ಕೆ ಮುಂದೂಡಿತು.